ಮಲೆನಾಡು ಪ್ರದೇಶ ಅಭಿವೃದ್ಧಿ ಯೋಜನೆಯ ಕಾಮಗಾರಿಗಳು

885 (1028) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಮಲೆನಾಡು ಪ್ರದೇಶ ಅಭಿವೃದ್ಧಿ ಕಾಮಗಾರಿಗಳಿಗೆ ಕಳೆದ ವರ್ಷ ಹಾಗೂ ಈ ವರ್ಷ ಆಯವ್ಯಯದಲ್ಲಿ ಎಷ್ಟು ಹಣವನ್ನು ತೆಗೆದಿರಿಸಲಾಗಿತ್ತು. ಇದರಲ್ಲಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ.

ಆ. ಬೆಳಗಾಂ ಜಿಲ್ಲೆಯಲ್ಲಿ ಆರ್ಥಿಕ ಮುಗ್ಗಟ್ಟಿನಿಂದ ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗಾದರೆ ಈ ಕಾಮಗಾರಿಗಳಿಗೆ ಎಷ್ಟು ಹಣ ಬಿಡುಗಡೆ ಮಾಡಬೇಕಾಗುವುದು ಹಾಗೂ ಎಷ್ಟು ದಿನಗಳಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು.

ಇ. ಬೆಳಗಾಂ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಮಂಜೂರಾದ ಕೆಲಸಗಳು ಈಗ ಯಾವ ಹಂತದಲ್ಲಿವೆ. (ಪ್ರತಿಯೊಂದು ಕೆಲಸದ ವಿವರ ನೀಡುವುದು)

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು) :

ಅ. ನಿಗದಿಪಡಿಸಿದ ಹಣ	(ಲಕ್ಷ ರೂ. ಗಳಲ್ಲಿ)
2001-02	1725-00
2002-03	1645-00
ಬಿಡುಗಡೆಯಾದ ಹಣ	
2001-02	1135-00
2002-03	548-00
	(19-7-2002ರ ಅಂತ್ಯದವರೆಗೆ)

ಆ. ಬೆಳಗಾವಿ ಜಿಲ್ಲೆಯು ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವುದಿಲ್ಲ.

ಇ. ಉದ್ಭವಿಸುವುದಿಲ್ಲ.

ಬೈಲಹೊಂಗಲದಲ್ಲಿ ಐ.ಟಿ.ಪಾರ್ಕ್ ಯೋಜನೆ

886 (1030) - ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ): ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹುಬ್ಬಳ್ಳಿಯಲ್ಲಿ ಪ್ರಾರಂಭಿಸಿದಂತೆ ಬೆಳಗಾವಿಯಲ್ಲಿ ಹಾಗೂ ತಾಲ್ಲೂಕು ಮುಖ್ಯ ಕೇಂದ್ರ ಸ್ಥಾನವಾದ ಬೈಲಹೊಂಗಲದಲ್ಲಿಯೂ ಸಹ ಐ.ಟಿ. ಪಾರ್ಕ್ ಯೋಜನೆಯನ್ನು ಕೈಗೊಳ್ಳಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು) :

ಅ. ಬೆಳಗಾವಿಯಲ್ಲಿ ಹಾಗೂ ತಾಲ್ಲೂಕು ಮುಖ್ಯ ಕೇಂದ್ರ ಸ್ಥಾನವಾದ ಬೈಲಹೊಂಗಲದಲ್ಲಿ "ಐ.ಟಿ." ಪಾರ್ಕ್ ಪ್ರಾರಂಭಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದಿಲ್ಲ.

ಖಾಸಗಿ ಕಂಪನಿಯವರು ಸದರಿ ಸ್ಥಳಗಳಲ್ಲಿ "ಐ.ಟಿ." ಪಾರ್ಕ್‌ಗಳನ್ನು ಸ್ಥಾಪಿಸಲು ಮುಂದೆ ಬಂದಲ್ಲಿ ಅಂತಹ ಕಂಪನಿಗಳಿಗೆ ಸಹಸ್ರಮಾನದ ಮಾಹಿತ ತಂತ್ರಜ್ಞಾನ ನೀತಿಯಡಿಯಲ್ಲಿ ಸರ್ಕಾರವು ಘೋಷಿಸಿರುವ ವಿನಾಯಿತಿ ಮತ್ತು ರಿಯಾಯಿತಿಗಳನ್ನು ನೀಡಿ ಉತ್ತೇಜಿಸಲಾಗುವುದು.

ಸವದತ್ತಿ ತಾಲ್ಲೂಕಿನ_ಶ್ರೀಕ್ಷೇತ್ರ ಸೊಗಲವನ್ನು ಅಭಿವೃದ್ಧಿಪಡಿಸುವುದು

887 (1032) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಶ್ರೀ ಕ್ಷೇತ್ರ ಸೊಗಲವು ಯಾತ್ರಿಕರ ಹಾಗೂ ಪ್ರವಾಸಿಗರ ಕೇಂದ್ರವಾಗಿದ್ದು, ಇಲ್ಲಿ ಯಾತ್ರಿಕರ ಸಲುವಾಗಿ ಅದನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ?

2. ಹಾಗಿದ್ದಲ್ಲಿ, ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು?

ಶ್ರೀಮತಿ ಸುಮಾ ವಸಂತ್ (ಮುಜರಾಯಿ ರಾಜ್ಯಸಚಿವರು) :

1. ಶ್ರೀ ಕ್ಷೇತ್ರ ಸೂಗಲವು ಯಾತ್ರಿಕರ ಹಾಗೂ ಪ್ರವಾಸಿಗರ ಕೇಂದ್ರವಾಗಿದ್ದು, ಈ ಕ್ಷೇತ್ರದ ಅಭಿವೃದ್ಧಿಯು ಈ ಇಲಾಖೆ ವ್ಯಾಪ್ತಿಗೆ ಬರುವುದಿಲ್ಲ ಹಾಗೂ ಬಿಪಿಟಿ ಕಾಯ್ದೆ ಪ್ರಕಾರ ನೊಂದಾಯಿಸಲ್ಪಟ್ಟ ಸಂಸ್ಥೆಗಳಿಗೆ ಮಾತ್ರ ಅಭಿವೃದ್ಧಿ ಕಾರ್ಯಕ್ಕೆ ಪ್ರಸ್ತಾವನೆ ಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು.

2. ಪ್ರಶ್ನೆ ಉದ್ಭವಿಸುವುದಿಲ್ಲ.

ಶ್ರೀ ಕ್ಷೇತ್ರ ಯಲ್ಲಮ್ಮನ ಗುಡ್ಡವನ್ನು ಅಭಿವೃದ್ಧಿ ಪಡಿಸುವುದು

888 (1034) - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ): ಮಾನ್ಯ ಮುಜರಾಯಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ತಿರುಪತಿ ಮಾದರಿಯಲ್ಲಿ ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಶ್ರೀ ಕ್ಷೇತ್ರ ಯಲ್ಲಮ್ಮನ ಗುಡ್ಡದಲ್ಲಿ ಹೆಚ್ಚಿಗೆ ಅಭಿವೃದ್ಧಿಪಡಿಸಲು ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ?

2. ಈ ಯೋಜನೆಗಳನ್ನು ಜಾರಿಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀಮತಿ ಸುಮಾ ವಸಂತ್ (ಮುಜರಾಯಿ ರಾಜ್ಯ ಸಚಿವರು) :

1. ತಿರುಪತಿ ಮಾದರಿಯಲ್ಲಿ ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಶ್ರೀ ರೇಣುಕಾ ಎಲ್ಲಮ್ಮ ದೇವಾಲಯದ ಕ್ಷೇತ್ರದಲ್ಲಿ ಈ ಕೆಳಕಂಡ ಅಭಿವೃದ್ಧಿ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ.

1. ವೃತ್ತ ರಸ್ತೆ ಮತ್ತು ಕೂಡು ರಸ್ತೆಗಳ ನಿರ್ಮಾಣ
2. ರಸ್ತೆಗಳ ಅಗಲೀಕರಣ
3. ಕುಡಿಯುವ ನೀರಿನ ವ್ಯವಸ್ಥೆ
4. ತಂಗುದಾಣಗಳ ನಿರ್ಮಾಣ
5. ವಾಣಿಜ್ಯ ಸಂಕೀರ್ಣ ನಿರ್ಮಾಣ